**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೊಡ್ಡಬಳ್ಳಾಪುರ**

**ಸಿಸಿ ನಂ 694/2012**

**ಸಿ.ಡಬ್ಲೂ: 15 ಪಿಡಬ್ಲೂ: 12**

| | |
|---|---|
| ಸಾಕ್ಷಿದಾರರ ಹೆಸರು | ಟಿ.ಬಿ. ಶಿವಕುಮಾರ್ |
| ತಂದೆಯ ಹೆಸರು | ಎಂ. ಭೈರಪ್ಪ |
| ವಯಸ್ಸು | ಸುಮಾರು 51 ವರ್ಷ |
| ಉದ್ಯೋಗ | ಪೋಲೀಸ್ ಇನ್ಸ್ ಪೆಕ್ಟರ್ |
| ವಾಸ ಸ್ಥಳ | ಬೆಂಗಳೂರು |

**ದಿನಾಂಕಃ 18.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**Through V.C.**

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಅಭಿಯೋಜಕ ರವರಿಂದ**

ದಿಃ 26.08.2008 ರಿಂದ ದಿಃ 27.09.2012 ರವರೆಗೂ ದೊಡ್ಡಬಳ್ಳಾಪುರ ನಗರ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕಾರ್ಯನಿರ್ವಹಿಸಿರುತ್ತೇನೆ. ದಿಃ 05.04.2012 ರಂದು ಬೆಳಿಗ್ಗೆ 12-05 ಗಂಟೆ ಸಮಯದಲ್ಲಿ ಪಿರ್ಯಾದುದಾರರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 47/2012 ರಲ್ಲಿ ಕಲಂ 506, 498 ಎ, 504, 323, 114 ಸಹವಾಚಕ ಕಲಂ 34 ಅಡಿಯಲ್ಲಿ ಹಾಗೂ ವರದಕ್ಷಿಣೆ ನಿಷೇಧ ಕಾಯ್ದೆ ಕಲಂ 3 ಮತ್ತು 4 ರ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ ಹಾಗೂ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸಾಕ್ಷಿಯು ನಿಪಿ-1 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ-6 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಂಚರನ್ನು ಬರಮಾಡಿಕೊಂಡು ಪಂಚರಿಗೆ ಪ್ರಕರಣದ ಮಾಹಿತಿಯನ್ನು ತಿಳಿಸಿ ಪಿರ್ಯಾದುದಾರರು ನೀಡಿದ ಮಾಹಿತಿಯ ಮೇರೆಗೆ ಪಂಚನಾಮೆ ಕ್ರಮವನ್ನು ಮಧ್ಯಾಹ್ನ 1-00 ರಿಂದ 1-30 ರವರೆಗೂ ಜರುಗಿಸಿರುತ್ತೇನೆ. ಜರುಗಿಸುವ ವೇಳೆ ಚಾಸಾ-1, 10 ಮತ್ತು 11 ರವರು ಹಾಜರಿದ್ದರು. ಪಂಚನಾಮೆಯ ವೇಳೆ ನಿಪಿ-3 ರಿಂದ 6 ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಶಾನೆಗಳನ್ನು ನೋಡಿ ಗುರುತಿಸಿರುತ್ತಾರೆ

ಹಾಗೂ ನಿಪಿ-2 ಮಹಜರ್ ನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಂತರ ಠಾಣಾ ಮಾಲು ಪಟ್ಟಿ ಸಂಖ್ಯೆ 14/2012 ರಲ್ಲಿ ಅವುಗಳನ್ನು ದಾಖಲಿಸಿಕೊಂಡು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಆರೋಪಿತರ ಪತ್ತೆಗಾಗಿ ಚಾಸಾ-12 ಮತ್ತು 13 ರವರನ್ನು ನೇಮಿಸಿರುತ್ತೇನೆ. ಅದೇ ದಿನ ಚಾಸಾ-12 ಮತ್ತು 13 ರವರು ತಾಲ್ಲೂಕು ಕಛೇರಿಯ ಸರ್ಕಲ್ ಬಳಿ 1 ನೇ ಆರೋಪಿಯನ್ನು 2 ಗಂಟೆಗೆ ದಸ್ತಗಿರಿ ಮಾಡಿ ನನ್ನ ಸಮಕ್ಷಮ ಮಧ್ಯಾಹ್ನ 2-30 ಗಂಟೆಗೆ ಹಾಜರುಪಡಿಸಿರುತ್ತಾರೆ. ಸದರಿ ಆರೋಪಿತರನ್ನು ಸೂಕ್ತ ಬಂಧನ ಕ್ರಮ ಅನುಸರಿಸಿ ದಸ್ತಗಿರಿ ಮಾಡಿ ಹೇಳಿಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಪ್ರಕರಣವು ಘೋರ ಪ್ರಕರಣವಾದ ಕಾರಣ ಚಾಸಾ-16 ರವರಿಗೆ ಪ್ರಕರಣದ ಮುಂದಿನ ತನಿಖೆಗಾಗಿ ಪ್ರಕರಣದ ಕಡತನವನ್ನು ವರ್ಗಾಯಿಸಿರುತ್ತೇನೆ. ಆರೋಪಿತರು ಗೈರು ಹಾಜರಿದ್ದು, ಅವರನ್ನು ನೋಡಿ ಗುರುತಿಸುವಲ್ಲಿ ಆರೋಪಿ ಪರ ವಕೀಲರಿಂದ ಯಾವುದೇ ತಕರಾರು ಇರುವುದಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ಪಿರ್ಯಾದುದಾರರು ಸುಳ್ಳು ದೂರನ್ನು ನೀಡಿದ್ದು, ಅದನ್ನು ಪರಿಶೀಲನೆ ಮಾಡದೆಯೇ ಸ್ವೀಕರಿಸಿ, ಪ್ರ.ವ.ವರದಿಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಯಾವುದೇ ಸ್ಥಳ ಮಹಜರ್ ಮಾಡಿ ಯಾವುದೇ ವಸ್ತುಗಳನುನ ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**
**ಓ ಹೇ ಕೇ ಸರಿ ಇದೆ**

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ದೊಡ್ಡಬಳ್ಳಾಪುರ.**